## 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ

## Spl.C.113/2023

ದಿಃ 13.02.2025

(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-9 Pw-13

| | | |
|---|---|---|
| ಹೆಸರು | ಃ | ಕೃಷ್ಣೇಗೌಡ |
| ತಂದೆಯ ಹೆಸರು | ಃ | ಅಪ್ಪಾಜಿಗೌಡ |
| ವಯಸ್ಸು | ಃ | 70 ವರ್ಷ |
| ಉದ್ಯೋಗ | ಃ | ಏನೂ ಇಲ್ಲ |
| ವಾಸಸ್ಥಳ | ಃ | ಉಜ್ಜನಹಳ್ಳಿ,<br>ಚನ್ನಪಟ್ಟಣ ತಾಃ |

ಮುಖ್ಯ ವಿಚಾರಣೆಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

1. ನನಗೆ ಚಾಸಾಃ1 ರಿಂದ 8 ಮತ್ತು 10 ಗೊತ್ತು.

2. ಚಾಸಾಃ 1 ಪರಿಶಿಷ್ಟ ಜಾತಿಗೆ ಸೇರಿದವಳಾಗಿರುತ್ತಾಳೆ.

3. ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿತರು ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿದ್ದು ಅವರಿಗೆ ಚಾಸಾಃ 1 ಇವಳ ಜಾತಿ ಗೊತ್ತು.

4. ಈ ಪ್ರಕರಣದಲ್ಲಿ ನನಗೇನೂ ಮಾಹಿತಿ ಇರುವುದಿಲ್ಲ.

5. ಪೊಲೀಸರು ಯಾವ ಕಾಲಕ್ಕೂ ಯವೂವುದೇ ರೀತಿಯಲ್ಲಿ ನನ್ನನು ವಿಚಾರಣೆ ಮಾಡಿರುವುದಿಲ್ಲ ಮತ್ತು ಯಾವುದೇ ನನ್ನ ಹೇನಿಕೆಯನ್ನು ದಾಖಲಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರು ಕೋರಿದ್ದಾರೆ. ಆದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

<u>ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ</u>

6. ಈಗ ನನಗೆ ಓದಿ ಹೇಳಿದ ನಿ.ಪಿ.12 ರಂತೆ, “ಉಜ್ಜನಹಳ್ಳಿ ಗ್ರಾಮದ ಸರ್ವೆ ನಂಬರ್ 56/2 ರಲ್ಲಿ ಒಂದು ಎಕರೆ ಆರು ಗುಂಟೆ ಜಾಗದಲ್ಲಿ ಕಾಲೋನಿಯವರು ಮನೆಗಳನ್ನು ಕಟ್ಟಿಕೊಂಡು ವಾಸ ಮಾಡುತ್ತಿದ್ದು ಇವರುಗಳು ಕಟ್ಟಿಕೊಂಡಿರುವ ಮನೆಯ ಪಕ್ಕ ನಮ್ಮ

.....................................

.....................................

.....................................

.....................................

ಜಾತಿ ನಿಂದನೆ ಮಾಡಿ ಪ್ರಾಣ ಬೆದರಿಕೆ ಹಾಕಿರುವ ಲಕ್ಷ್ಮಣ ಪುಟ್ಟಲಿಂಗೇಗೌಡ ಮತ್ತು ಶ್ರೀನಿವಾಸ ಇವರುಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕೋರುತ್ತೇನೆ, ಆರೋಪಿಗಳನ್ನು ಮುಂದಿನ ದಿನಗಳಲ್ಲಿ ನೋಡಿದರ ಗುರುತಿಸುತ್ತೇನೆ“ ಎಂದು ದಿಃ18.05.2023 ರಂದು ಪೊಲೀಸರ ಮುಂದೆ ನಾನು ಹೇಳಿಕೆ ನೀಡಿರುತ್ತೇನೆಂದು ಸೂಚಿಸುವುದು ಸರಿಯಲ್ಲ.

<u>ಪಾಟೀ ಸವಾಲುಃ ಶ್ರೀ. ಎಸ್ ಎನ್ ಜಿ ., ವಕೀಲರಿಂದ ಆರೋಪಿಗಳ ಪರವಾಗಿಃ ಏನೂ ಇಲ್ಲವೆಂದು ತಿಳಿಸಿರುತ್ತಾರೆ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.